## ತಾಂತ್ರಿಕ ಶಿಕ್ಷಣ ನಿರ್ದೇಶಕರು, ಕರ್ನಾಟಕ, ಬೆಂಗಳೂರು ಇವರ ಕಚೇರಿ ನಡವಳಿಗಳು

ವಿಷಯ: ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ ಶ್ರೀ ಜಯಚಾಮರಾಜೇಂದ್ರ ಕಾಲೇಜ್ ಆಫ್ ಇಂಜಿನೀಯರಿಂಗ್ , ಮೈಸೂರು ಸಂಸ್ಥೆಯ ಸಿಬ್ಬಂದಿವರ್ಗದವರಿಗೆ ಜೂನ್'19, ಜುಲೈ'19, ಆಗಸ್ಟ್'19 ಮತ್ತು ಸೆಪ್ಟೆಂಬರ್ 2019 ಮಾಹೆಗಳಿಗೆ ಸರ್ಕಾರದ ಪಾಲಿನ ಸಹಾಯಾನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

ಉಲ್ಲೇಖ:
1) ಸರ್ಕಾರಿ ಆದೇಶ ಸಂಖ್ಯೆ: ಇಡಿ/184/ಟಿಪಿಇ/ 2009, ದಿ: 27.07.2009
2) ಸರ್ಕಾರಿ ಆದೇಶ ಸಂಖ್ಯೆ: ಇಡಿ/184/ಟಿಪಿಇ/ 2009, ದಿ: 02.03.2010
3) ಸರ್ಕಾರಿ ಆದೇಶ ಸಂಖ್ಯೆ: ಇಡಿ/184/ಟಿಪಿಇ/ 2009, ದಿ: 14-05-2010
4) ಸರ್ಕಾರಿ ಪತ್ರ ಸಂಖ್ಯೆ: ಇಡಿ/104/ಯುಆರ್‌ಸಿ/ 2017, ದಿ: 18.11.2019
5) ಪ್ರಿನ್ಸಿಪಾಲರು, ಶ್ರೀ ಜಯಚಾಮರಾಜೇಂದ್ರ ಕಾಲೇಜ್ ಆಫ್ ಇಂಜಿನೀಯರಿಂಗ್ , ಮೈಸೂರು ಇವರ ಪತ್ರ ದಿ:

<u>ಪ್ರಸ್ತಾವನೆ:-</u>

ಉಲ್ಲೇಖ(1)ರ ಸರ್ಕಾರದ ಆದೇಶದಲ್ಲಿ ಸರ್ಕಾರವು ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ ಖಾಸಗಿ ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು ಸಿಬ್ಬಂದಿಗಳಿಗೆ ಸರ್ಕಾರದಿಂದ ಬಿಡುಗಡೆ ಮಾಡುವ ಶೇ.85 ರಷ್ಟು ಸಹಾಯಾನುದಾನವನ್ನು ಪ್ರತೀ ತಿಂಗಳು ರಾಷ್ಟ್ರೀಕೃತ ಬ್ಯಾಂಕ್‌ಗೆ ಜಮೆ ಮಾಡುವ ಮೂಲಕ ಸಿಬ್ಬಂದಿ ವರ್ಗದವರುಗಳಿಗೆ (ಬೋಧಕ ಮತ್ತು ಬೋಧಕೇತರ) ವಿತರಿಸಲು ಸರ್ಕಾರವು ಅನುಮತಿಸಿರುತ್ತದೆ. ಹಾಗೂ ಈ ಸಂಬಂಧ ಮುಂದಿನ ಅಗತ್ಯ ಕ್ರಮವನ್ನು ತಾಂತ್ರಿಕ ಶಿಕ್ಷಣ ನಿರ್ದೇಶಕರು ಕೈಗೊಳ್ಳಲು ಆದೇಶಿಸಿರುತ್ತದೆ.

ಉಲ್ಲೇಖ (2) ಮತ್ತು (3) ರ ಆದೇಶಗಳನ್ವಯ, ಇಲಾಖೆಯು ತನ್ನ ಅಧೀನಕ್ಕೆ ಒಳಪಟ್ಟಿರುವ ಎಲ್ಲಾ ಅನುದಾನಿತ ಸಂಸ್ಥೆಗಳಿಗೆ, 'ಸ್ಟೇಟ್ ಬ್ಯಾಂಕ್ ಆಫ್ ಮೈಸೂರು' ಶಾಖೆಗಳಲ್ಲಿ ಸಿಬ್ಬಂದಿ ವರ್ಗದವರ ಹಾಗೂ ಪ್ರಾಂಶುಪಾಲರ ಹೆಸರಿನಲ್ಲಿ ಪ್ರತ್ಯೇಕ ಉಳಿತಾಯ ಖಾತೆಗಳನ್ನು ತೆರೆಯುವಂತೆ ಸೂಚನೆಯನ್ನು ನೀಡಿದ್ದು, ಅದರಂತೆ, ಈ ಕೆಳಕಂಡ ಅನುದಾನಿತ ಸಂಸ್ಥೆ ಸಿಬ್ಬಂದಿ ವರ್ಗದವರ ಹಾಗೂ ಪ್ರಾಂಶುಪಾಲರ ಹೆಸರಿನಲ್ಲಿ ಪ್ರತ್ಯೇಕ ಖಾತೆಗಳನ್ನು ತೆರೆಯಲಾಗಿದೆ.

ಸದರಿ ಸಂಸ್ಥೆಗೆ ಜೂನ್'19, ಜುಲೈ'19, ಆಗಸ್ಟ್'19 ಮತ್ತು ಸೆಪ್ಟೆಂಬರ್ 2019 ಮಾಹೆಗಳಿಗೆ ಸಹಾಯನುದಾನ ಬಿಡುಗಡೆ ಕುರಿತು ಸರ್ಕಾರದ ಸ್ಪಷ್ಟೀಕರಣ ಕೋರಲಾಗಿತ್ತು, ಉಲ್ಲೇಖ(4) ರ ಸರ್ಕಾರದ ಪತ್ರದಲ್ಲಿ ಶ್ರೀ ಜಯಚಾಮರಾಜೇಂದ್ರ ಕಾಲೇಜ್ ಆಫ್ ಇಂಜಿನೀಯರಿಂಗ್ , ಮೈಸೂರು,ಈ ಸಂಸ್ಥೆಗೆ ಸರ್ಕಾರದ ಅನುದಾನಿತ ಸಂಸ್ಥೆಯಾಗಿಯೇ ಮುಂದುವರೆಯುತ್ತದೆ ಎಂದು ತಿಳಿಸುತ್ತಾ ಸಿಬ್ಬಂದಿಗಳಿಗೆ ತಡೆಹಿಡಿದಿರುವ ವೇತನವನ್ನು ಬಿಡುಗಡೆಗೊಳಿಸುವಂತೆ ತಿಳಿಸಲಾಗಿದೆ.

ಪ್ರಿನ್ಸಿಪಾಲರು, ಜೂನ್'19, ಜುಲೈ'19, ಆಗಸ್ಟ್'19 ಮತ್ತು ಸೆಪ್ಟೆಂಬರ್ 2019 ಮಾಹೆಗಳ ಸಹಾಯಾನುದಾನದ ಬಿಲ್ಲುಗಳನ್ನು ಪಾವತಿಗಾಗಿ ಈ ಕಚೇರಿಗೆ ಸಲ್ಲಿಸಿರುತ್ತಾರೆ. ಹಾಗೂ ಸದರಿ ಮಾಹೆಗಳಿಗೆ ಆಡಳಿತ ಮಂಡಳಿ ವತಿಯಿಂದ ಈಗಾಗಲೇ ಸಿಬ್ಬಂದಿವರ್ಗದವರಿಗೆ ವೇತನ ಪಾವತಿಸಿರುವ ಕುರಿತು ಬ್ಯಾಂಕ್ ದಾಖಲೆಗಳನ್ನು ಸಲ್ಲಿಸಿರುತ್ತಾರೆ. ಆದ್ದರಿಂದ ಸದರಿ ಮಾಹೆಗಳ ಸಹಾಯನುದಾನವನ್ನು ಇಸಿಎಸ್ ಮಾಡದೇ ಪ್ರಿನ್ಸಿಪಾಲರಿಗೆ ಚೆಕ್ ಮೂಲಕ ಸಹಾಯನುದಾನವನ್ನು ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

ಸಂಸ್ಥೆ ಸಲ್ಲಿಸಿರುವ ಜೂನ್'19, ಜುಲೈ'19, ಆಗಸ್ಟ್'19 ಮತ್ತು ಸೆಪ್ಟೆಂಬರ್ 2019 ರ ಮಾಹೆಗಳ ಸಹಾಯಾನುದಾನ ಬಿಲ್ಲುಗಳನ್ನು ಪರಿಶೀಲಿಸಲಾಗಿದೆ. ಸಂಸ್ಥೆಯ ಕ್ಲೈಮ್‌ಗಳನ್ನು ಇಲಾಖೆಯ ಪೂರ್ಣ ಲೆಕ್ಕ ತಪಾಸಣೆಯ ನಿಬಂಧನೆಗೊಳಪಡಿಸಿ, ಈ ಕೆಳಕಂಡ ಪಟ್ಟಿಯ ಕಾಲಂ(5) ರಲ್ಲಿ ಕಾಣಿಸಿರುವ ಸರ್ಕಾರದ ಪಾಲಿನ 85% ಮೊತ್ತ ಒಟ್ಟು **ರೂ.58670297/-(ರೂಪಾಯಿ ಐದು ಕೋಟಿ ಎಂಬತ್ತಾರು ಲಕ್ಷದ ಎಪ್ಪತ್ತು ಸಾವಿರದ ಎರಡು ನೂರಾ ತೊಂಬತ್ತೇಳು ಮಾತ್ರ)**ಗಳನ್ನು ಜೂನ್'19, ಜುಲೈ'19, ಆಗಸ್ಟ್'19 ಮತ್ತು ಸೆಪ್ಟೆಂಬರ್ 2019 ಮಾಹೆಗಳ ಸಹಾಯಾನುದಾನವಾಗಿ ವಿತರಿಸುವ ಸಲುವಾಗಿ ಬಿಡುಗಡೆಗೊಳಿಸಲು ತೀರ್ಮಾನಿಸಲಾಗಿದೆ. ಆದುದರಿಂದ, ಈ ಕೆಳಕಂಡ ಆದೇಶ.

## ಆದೇಶ

**ಸಂಖ್ಯೆ: ಡಿಟಿಇ 31 ಜಿಆರ್‌ಟಿ(2) 2019 ಬೆಂಗಳೂರು, ದಿ:2-12-19**

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಜೂನ್'19, ಜುಲೈ'19, ಆಗಸ್ಟ್'19 ಮತ್ತು ಸೆಪ್ಟೆಂಬರ್ 2019 ರ ಮಾಹೆಗಳಿಗೆ ಒಟ್ಟಾರೆ ಕಾಲಂ (5) ರಲ್ಲಿ ಕಾಣಿಸಿರುವ ವಾಸ್ತವಿಕ ಸಹಾಯನುದಾನದ ಸರ್ಕಾರದ ಪಾಲಿನ 85% ಮೊತ್ತ **ರೂ.58670297/-(ರೂಪಾಯಿ ಐದು ಕೋಟಿ ಎಂಬತ್ತಾರು ಲಕ್ಷದ ಎಪ್ಪತ್ತು ಸಾವಿರದ ಎರಡು ನೂರಾ ತೊಂಬತ್ತೇಳು ಮಾತ್ರ)**ಗಳನ್ನು ಈ ಮೂಲಕ ಬಿಡುಗಡೆ ಮಾಡಲಾಗಿದೆ ಹಾಗೂ ಈ ಮೊತ್ತವನ್ನು ಸಿ.ಟಿ.ಎಸ್.8 ರಲ್ಲಿ 'ಡ್ರಾ' ಮಾಡಿ ಪ್ರಿನ್ಸಿಪಾಲರಿಗೆ ಚೆಕ್ ಮೂಲಕ ವಿತರಿಸಲು ಆದೇಶಿಸಲಾಗಿದೆ.

## ಅನುಬಂಧ

| ಕ್ರ.ಸಂ | ಸಂಸ್ಥೆ ಸಂಕೇತ ಸಂಖ್ಯೆ | ಸಂಸ್ಥೆಯ ಹೆಸರು | ಜೂನ್, ಜುಲೈ, ಆಗಸ್ಟ್ ಮತ್ತು ಸೆಪ್ಟೆಂಬರ್ 2019 ಮಾಹೆಗಳ 100% ಮೊತ್ತ (ರೂ.) | ಜೂನ್, ಜುಲೈ, ಆಗಸ್ಟ್ ಮತ್ತು ಸೆಪ್ಟೆಂಬರ್ 2019 ಮಾಹೆಗಳ ಸರ್ಕಾರದ ಪಾಲಿನ 85% ಮೊತ್ತ (ರೂ.) |
|---|---|---|---|---|
| 1 | 2 | 3 | 4 | 5 |
| 1 | ಇ206 | ಶ್ರೀ ಜಯಚಾಮರಾಜೇಂದ್ರ ಕಾಲೇಜ್ ಆಫ್ ಇಂಜಿನೀಯರಿಂಗ್ , ಮೈಸೂರು. | 17341336 + 17338003 + 17172269 + 17172269 | 14740136 + 14737303 + 14596429 + 14596429 |
| | | **ಒಟ್ಟು ಮೊತ್ತ ರೂ.** | **69023877** | **58670297** |

ಷರತ್ತು ಮತ್ತು ನಿಬಂಧನೆಗಳು:-

1)ಇಂಜಿನಿಯರಿಂಗ್ ಕಾಲೇಜುಗಳಿಗೆ ಸಂಬಂಧಪಟ್ಟಂತೆ ಸಹಾಯಾನುದಾನವನ್ನು ಪ್ರಿನ್ಸಿಪಾಲರುಗಳು ಸಲ್ಲಿಸಿರುವ ಬಿಲ್ಲಿನ ಆಧಾರದ ಹಾಗೂ ವಾಸ್ತವಿಕ ಸಹಾಯಾನುದಾನದ ಸರ್ಕಾರದ ಪಾಲಿನ ಶೇ.85ರಷ್ಟು ವೇತನವನ್ನು ಪರಿಗಣಿಸಲಾಗಿದೆ. ಈ ಸಹಾಯಾನುದಾನ ಬಿಡುಗಡೆಯು ಇಲಾಖೆಯ ಲೆಕ್ಕ ತಪಾಸಣೆಗೆ ಒಳಪಟ್ಟಿರುತ್ತದೆ.

2/12/19

2)ಆಡಳಿತ ಮಂಡಳಿಯ ಪಾಲಿನ ಶೇ.15 ರ ಮೊತ್ತವನ್ನು ಸಿಬ್ಬಂದಿಗಳ ಖಾತೆಗಳಿಗೆ ಪಾವತಿಸತಕ್ಕದ್ದು.

3)ಯಾವೊಬ್ಬ ನೌಕರನಿಗೆ ಹೆಚ್ಚಿನ ಅನುದಾನ ಪಾವತಿಯಾಗಿದ್ದು ಕಂಡು ಬಂದಲ್ಲಿ, ಅಂತಹ ನೌಕರನಿಂದ ನೀಡಲಾಗಿರುವ ಹೆಚ್ಚುವರಿ ಮೊತ್ತವನ್ನು ನೇರವಾಗಿ ವಸೂಲಿ ಮಾಡಲಾಗುವುದು.

4)2018-19 ನೇ ಸಾಲಿನಲ್ಲಿ ಇಲಾಖೆಯಿಂದ ಬಿಡುಗಡೆಯಾಗಿರುವ ಅನುದಾನದ ಬಗ್ಗೆ 'ಬಳಕೆ ಪ್ರಮಾಣಪತ್ರ' ಹಾಗೂ 'ಸಿಎ' ದೃಢೀಕೃತ ಲೆಕ್ಕಪರಿಶೋಧನಾ ವರದಿಯನ್ನು ಕ.ಆ.ಸಂಹಿತೆ ಅನುಚ್ಛೇದ 161ರ ಅನ್ವಯ ಇಲಾಖೆಗೆ ಸಲ್ಲಿಸತಕ್ಕದ್ದು.

5)ಈಗ ಬಿಡುಗಡೆ ಮಾಡಿರುವ ಅನುದಾನ ಮೊತ್ತದ ಖರ್ಚನ್ನು 2019-20 ನೇ ಸಾಲಿನ ಕೆಳಕಂಡ ಲೆಕ್ಕ ಶೀರ್ಷಿಕೆಯಲ್ಲಿ ಭರಿಸತಕ್ಕದ್ದು. 2203-ತಾಂತ್ರಿಕ ಶಿಕ್ಷಣ-00-104-ಸರ್ಕಾರೇತರ ತಾಂತ್ರಿಕ ಕಾಲೇಜುಗಳು, ಹಾಗೂ ಸಂಸ್ಥೆಗಳಿಗೆ ಸಹಾಯಾನುದಾನ-0-01-ಸರ್ಕಾರೇತರ ತಾಂತ್ರಿಕ ಶಾಲೆಗಳು-01-ಸಹಾಯಾನುದಾನ(2203-00-104-0-01-101).

ನಿರ್ದೇಶಕರು.

ಇವರಿಗೆ ಸೂಕ್ತ ಕ್ರಮಕ್ಕಾಗಿ:

1) ಮೇಲ್ಕಂಡ ಅನುಬಂಧದಲ್ಲಿಯ ಪ್ರಾಚಾರ್ಯರಿಗೆ.
2) ನಿರ್ದೇಶನಾಲಯದ ಬಿಎಲ್ಎಸ್[3] ವಿಭಾಗಕ್ಕೆ.
3) ನಿರ್ದೇಶನಾಲಯದ ನಗದು ಶಾಖೆ.

ಪ್ರತಿ ಮಾಹಿತಿಗಾಗಿ:

1] ಮಹಾಲೇಖಪಾಲರು(ಎ&ಇ), ಕರ್ನಾಟಕ, ಬೆಂಗಳೂರು.
2] ಸ್ಪೆಷಲ್ ಸೆಲ್, ಮಹಾಲೇಖಪಾಲರವರ ಕಚೇರಿ, ಬೆಂಗಳೂರು.
3] ಖಜಾನಾಧಿಕಾರಿಗಳು, ರಾಜ್ಯ ಹುಜೂರು ಖಜಾನೆ, ಬೆಂಗಳೂರು, ಇವರ ಮಾಹಿತಿಗಾಗಿ
4] ಲೆಕ್ಕಾಧಿಕಾರಿಗಳು [ಬಿಲ್ಸ್].
5] ನಿರ್ದೇಶನಾಲಯದ ಐಎನ್ಎಸ್ (1), (2), (4) ಮತ್ತು ಆರ್ಇಸಿ(2) ಉಪಶಾಖೆಗಳಿಗೆ.
6] ಹೆಚ್ಚುವರಿ ಪ್ರತಿ [7] ಕಚೇರಿ ಪ್ರತಿ